15807 SL.NO:-78 Dt:-18-03-2026

**ಮಾನ್ಯ ವಿಧಾನ ಪರಿಷತ್ತು ಸದಸ್ಯರಾದ ಶ್ರೀ ಶಶೀಲ್ ಜಿ ನಮೋಶಿ ಇವರು ಶೂನ್ಯ ವೇಳೆಯಲ್ಲಿ ಪ್ರಸ್ತಾಪಿಸಿರುವ ಸೂಚನೆಗೆ ಉತ್ತರ**

**ವಿಷಯ:-**

ಇಂದಿನ ಮಕ್ಕಳ ಜೀವನದಲ್ಲಿ ಶೈಕ್ಷಣಿಕ ಎಷ್ಟು ಮಹತ್ವದ್ದಾಗಿದೆಯೋ ಅಷ್ಟೇ ಮಹತ್ವವೆನಿಸಿಕೊಂಡಿರುವುದು ದೈಹಿಕ ಶಿಕ್ಷಣ ಮತ್ತು ವಿಶೇಷ ಶಿಕ್ಷಣಗಳು. ಇವು ಮಕ್ಕಳಲ್ಲಿ ದೈಹಿಕ ಚಟುವಟಿಕೆ ಮಾತ್ರವಲ್ಲದೇ ಧೈರ್ಯ, ಮಾನಸಿಕ ಸ್ಥೈರ್ಯ ಹಾಗೂ ಮಾನವವೀಯ ಮೌಲ್ಯಗಳನ್ನು ಬೆಳೆಸುವಲ್ಲಿ ಹೆಚ್ಚಿನ ಪಾತ್ರ ವಹಿಸುತ್ತದೆ. ಹೀಗಾಗಿ ಸರ್ಕಾರಗಳು ಮಕ್ಕಳಿಗೆ ಪ್ರಾಥಮಿಕ ಹಾಗೂ ಪ್ರೌಢಶಾಲಾ ಹಂತಗಳಲ್ಲಿಯೇ ದೈಹಿಕ ಹಾಗೂ ಶಿಕ್ಷಣವನ್ನು ಕಡ್ಡಾಯಗೊಳಿಸಿದೆ.

ಆದರೆ ನಮ್ಮ ರಾಜ್ಯದಲ್ಲಿ ಕಳೆದ ಒಂದೂವರೆ ದಶಕದಿಂದಲೂ ಸಾವಿರಾರು ದೈಹಿಕ ಶಿಕ್ಷಕರ ಹಾಗೂ ವಿಶೇಷ ಶಿಕ್ಷಕರ ಹುದ್ದೆಗಳಿಗೆ ನೇಮಕಾತಿಯನ್ನೇ ನಡೆಸದೇ ಇರುವುದು ದುರದೃಷ್ಟಕರ ಸಂಗತಿಯಾಗಿದೆ. ರಾಜ್ಯದ ಸುಮಾರು 3,000 ಕ್ಕಿಂತಲೂ ಹೆಚ್ಚಿನ ಶಾಲೆಗಳಲ್ಲಿ ದೈಹಿಕ ಹಾಗೂ ವಿಶೇಷ ಶಿಕ್ಷಕರು ಇಲ್ಲದೇ ಇರುವುದು ಅತ್ಯಂತ ಆಘಾತಕಾರಿ ವಿಷಯ. ಇದರಿಂದಾಗಿ ಪ್ರತಿ ವರ್ಷ ರಾಜ್ಯದ ಲಕ್ಷಾಂತರ ವಿದ್ಯಾರ್ಥಿಗಳು ತಮ್ಮ ಪ್ರಾಥಮಿಕ ಹಾಗೂ ಪ್ರೌಢಶಾಲಾ ಹಂತದಲ್ಲಿ ದೈಹಿಕ ಶಿಕ್ಷಣ ಮತ್ತು ವಿಶೇಷ ಶಿಕ್ಷಣಗಳನ್ನು ಸಿಗದೆ ಅವಕಾಶ ವಂಚಿತರಾಗುತ್ತಿರುವುದು ದುರಾದೃಷ್ಟಕರ ಸಂಗತಿ.

ಸರ್ಕಾರವು ಕಳೆದ 15 ವರ್ಷಗಳಿಂದಲೂ ದೈಹಿಕ ಶಿಕ್ಷಣ ಮತ್ತು ವಿಶೇಷ ಶಿಕ್ಷಣಕ್ಕೆ ಸಂಬಂಧಿಸಿದಂತೆ ಯಾವುದೇ ನೇಮಕಾತಿಗಳನ್ನು ಮಾಡಿಕೊಳ್ಳದೆ ಇರುವುದರಿಂದ ಸರ್ಕಾರಕ್ಕೆ ಈ ಶಿಕ್ಷಣಗಳ ಮೇಲೆ ಆಸಕ್ತಿಯೇ ಇಲ್ಲವೇ ಎಂಬ ಸಂಶಯಕ್ಕೆ ಎಡೆ ಮಾಡಿಕೊಡುತ್ತಿದೆ. ಇನ್ನೊಂದೆಡೆ ಪ್ರತಿ ವರ್ಷ ಸಾವಿರಾರು ಅಭ್ಯರ್ಥಿಗಳು ದೈಹಿಕ ಶಿಕ್ಷಣದಲ್ಲಿ ಪದವಿ ಮತ್ತು ಸಾತ್ನಕೋತ್ತರ ಪದವಿಗಳನ್ನು ಪೂರ್ಣಗೊಳಿಸಿ, ಉದ್ಯೋಗವಿಲ್ಲದೇ ನೇಮಕಾತಿಗಾಗಿ ಜಾತಕ ಪಕ್ಷಿಗಳಂತೆ ಕಾದು ಕುಳಿತಿದ್ದಾರೆ. ಇನ್ನೂ ಸಾವಿರಾರು ಅಭ್ಯರ್ಥಿಗಳು ಈ ಸ್ನಾತಕೋತ್ತರ ಪದವಿಗಳಿಂದ ಉದ್ಯೋಗ ಭಾಗ್ಯವಿಲ್ಲದೆ ಭವಿಷ್ಯವೇ ಇಲ್ಲ ಎಂಬ ಜಿಗುಪ್ಸೆಯಿಂದ ಕೂಲಿ ಕೆಲಸವನ್ನು ಮಾಡಿಕೊಳ್ಳುತ್ತಿರುವುದು ಅತ್ಯಂತ ದುರಾದೃಷ್ಟಕರ ಸಂಗತಿಯಾಗಿದೆ.

ಆದ್ದರಿಂದ, ಇದೊಂದು ನಮ್ಮ ರಾಜ್ಯದ ಲಕ್ಷಾಂತರ ಬಡ ಮಕ್ಕಳ ಹಾಗೂ ಸಾವಿರಾರು ದೈಹಿಕ ಶಿಕ್ಷಣದಲ್ಲಿ ಪದವಿ ಮತ್ತು ಸ್ನಾತಕೋತ್ತರ ಪದವಿಯನ್ನು ಪಡೆದು ಕುಳಿತಿರುವ ಅಭ್ಯರ್ಥಿಗಳ ಭವಿಷ್ಯದ ವಿಷಯವಾಗಿರುವುದರಿಂದ ಈ ಕೂಡಲೇ ಶೀಘ್ರವಾಗಿ ದೈಹಿಕ ಶಿಕ್ಷಕರ ಮತ್ತು ವಿಶೇಷ ಶಿಕ್ಷಕರ ಹುದ್ದೆಗಳನ್ನು ಭರ್ತಿ ಮಾಡುವಂತೆ ಶೂನ್ಯ ವೇಳೆಯಲ್ಲಿ ಒತ್ತಾಯಿಸಿರುತ್ತಾರೆ.

**ಉತ್ತರ:**

2006-07 ನೇ ಸಾಲಿನಲ್ಲಿ ರಾಜ್ಯದ ಸರ್ಕಾರಿ ಪ್ರಾಥಮಿಕ ಶಾಲೆಗಳಿಗೆ ಒಟ್ಟು 672 ದೈಹಿಕ ಶಿಕ್ಷಣ ಶಿಕ್ಷಕರ ಹುದ್ದೆಗಳನ್ನು ಮತ್ತು 656 ವಿಶೇಷ ಶಿಕ್ಷಕರ ಹುದ್ದೆಗಳನ್ನು ಹಾಗೂ 2014-15ನೇ ಸಾಲಿನಲ್ಲಿ ರಾಜ್ಯ ಸರ್ಕಾರಿ ಪ್ರೌಢ ಶಾಲೆಗಳಿಗೆ ಒಟ್ಟು 138 ದೈಹಿಕ ಶಿಕ್ಷಣ ಶಿಕ್ಷಕರ ಹುದ್ದೆಗಳನ್ನು ಭರ್ತಿ ಮಾಡಲಾಗಿದೆ.

ಮುಂದುವರೆದು, 2012-13 ನೇ ಸಾಲಿನಲ್ಲಿ ಜೆಓಸಿ ಕಾಲೇಜುಗಳನ್ನು ಮುಚ್ಚಿದ ನಂತರ ಸದರಿ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿದ್ದ ವಿಶೇಷ ಶಿಕ್ಷಕರನ್ನು ಶಾಲಾ ಶಿಕ್ಷಣ ಇಲಾಖೆಗೆ ವಿಲೀನಗೊಳಿಸಿ,

ರಾಜ್ಯದ ಸರ್ಕಾರಿ ಪ್ರೌಢಶಾಲೆಗಳಲ್ಲಿ ಖಾಲಿಯಿರುವ ವಿಶೇಷ ಶಿಕ್ಷಕರ ಹುದ್ದೆಗಳಿಗೆ ಸ್ಥಳನಿಯುಕ್ತಿಗೊಳಿಸಲಾಗಿದೆ.

2025-26ನೇ ಸಾಲಿನ ಆಯವ್ಯಯ ಘೋಷಣೆಯಲ್ಲಿ "ಕಲ್ಯಾಣ ಕರ್ನಾಟಕ ಭಾಗದಲ್ಲಿ ಖಾಲಿ ಇರುವ 5,267 ಶಿಕ್ಷಕರ ಹುದ್ದೆಗಳನ್ನು ಭರ್ತಿ ಮಾಡಲಾಗುವುದು. ಮುಂದುವರೆದು, ಇಲಾಖೆಯಲ್ಲಿ ಇನ್ನೂ ಖಾಲಿ ಇರುವ ಶಿಕ್ಷಕರ ಹುದ್ದೆಗಳನ್ನು ತರ್ಕಬದ್ಧಗೊಳಿಸಿ 5000 ಹುದ್ದೆಗಳನ್ನು ಭರ್ತಿ ಮಾಡಲು ಕ್ರಮವಹಿಸಲಾಗುವುದು" ಎಂದು ಸನ್ಮಾನ್ಯ ಮುಖ್ಯಮಂತ್ರಿಗಳು ಆಯವ್ಯಯ ಕಂಡಿಕೆ-119 ರಲ್ಲಿ ಘೋಷಿಸಿರುತ್ತಾರೆ.

ಅದರಂತೆ, ದೈಹಿಕ ಶಿಕ್ಷಣ ಶಿಕ್ಷಕರು ಸೇರಿದಂತೆ ರಾಜ್ಯದ ಸರ್ಕಾರಿ ಪ್ರೌಢಶಾಲೆಗಳಲ್ಲಿ ಖಾಲಿ ಇರುವ ಶಿಕ್ಷಕರ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡುವ ಪ್ರಸ್ತಾವನೆಯು ಸರ್ಕಾರದ ಪರಿಶೀಲನೆಯಲ್ಲಿರುತ್ತದೆ

**ಸಂಖ್ಯೆ: ಇಪಿ 116 ಎಸ್‌ಇಎಸ್ 2025**

**(ಎಸ್ ಮಧುಬಂಗಾರಪ್ಪ)**
**ಶಾಲಾ ಶಿಕ್ಷಣ ಮತ್ತು ಸಾಕ್ಷರತಾ**
**ಇಲಾಖಾ ಸಚಿವರು**